# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 814 |
| ಮಾನ್ಯ ಸದಸ್ಯರ ಹೆಸರು | ಶ್ರೀ ಅ. ದೇವೇಗೌಡ (ಪದವೀಧರರ ಕ್ಷೇತ್ರ) |
| ಉತ್ತರಿಸಬೇಕಾದವರು | ಅಬಕಾರಿ ಸಚಿವರು |
| ಉತ್ತರಿಸಬೇಕಾದ ದಿನಾಂಕ | 13.07.2023 |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಅಬಕಾರಿ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳಿಗೆ ಪೊಲೀಸ್ ಇಲಾಖಾ ಸಿಬ್ಬಂದಿಯನ್ನು ನಿಯೋಜಿಸಲಾಗಿದ್ದು, ಸದರಿ ನಿಯೋಜಿತ ಪೊಲೀಸ್ ಸಿಬ್ಬಂದಿಯನ್ನು ಅಬಕಾರಿ ಇಲಾಖೆಯಲ್ಲಿ ವಿಲೀನಗೊಳಿಸಲು ಅವಕಾಶವಿದೆಯೇ; ಹಾಗಿದ್ದಲ್ಲಿ ಸರ್ಕಾರ ಏನು ಕ್ರಮ ತೆಗೆದುಕೊಂಡಿದೆ | ಅಬಕಾರಿ ಇಲಾಖೆಯಲ್ಲಿ ಖಾಲಿ ಇರುವ ಯಾವುದೇ ಹುದ್ದೆಗಳಿಗೆ ಪೊಲೀಸ್ ಇಲಾಖಾ ಸಿಬ್ಬಂದಿಯನ್ನು ನಿಯೋಜಿಸಿರುವುದಿಲ್ಲ. |
| ಆ) | ಅಬಕಾರಿ ಇಲಾಖೆಯಲ್ಲಿ ಖಾಲಿ ಇರುವ ಸಬ್‌ಇನ್ಸಪೆಕ್ಟರ್ ಹಾಗೂ ಗಾರ್ಡ್‌ಗಳ ಹುದ್ದಗಳೆಷ್ಟು; | ಅಬಕಾರಿ ಇಲಾಖೆಯಲ್ಲಿ ಖಾಲಿ ಇರುವ ಅಬಕಾರಿ ಉಪ ನಿರೀಕ್ಷಕರು ಹಾಗೂ ಅಬಕಾರಿ ಪೇದೆ ಹುದ್ದೆಗಳ ವಿವರ ಕೆಳಕಂಡಂತಿದೆ. |

| ಕ್ರ ಸಂ | ಹುದ್ದೆ | ಮಂಜೂರಾದ ಹುದ್ದೆಗಳ ಸಂಖ್ಯೆ | ಭರ್ತಿಯಾದ ಹುದ್ದೆಗಳ ಸಂಖ್ಯೆ | ಖಾಲಿ ಹುದ್ದೆಗಳ ಸಂಖ್ಯೆ |
|---|---|---|---|---|
| 1 | ಅಬಕಾರಿ ಉಪ ನಿರೀಕ್ಷಕರು | 623 | 419 | 204 |
| 2 | ಅಬಕಾರಿ ಪೇದೆ | 2137 | 1410 | 727 |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಇ) | ಸದರಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕರ್ನಾಟಕ ಲೋಕ ಸೇವಾ ಆಯೋಗಕ್ಕೆ ಪ್ರಸ್ತಾವನೆ ಸಲ್ಲಿಸಿದೆಯೇ; ಸಲ್ಲಿಸದಿದ್ದಲ್ಲಿ | ಅಬಕಾರಿ ಉಪ ನಿರೀಕ್ಷಕರು: 2019ನೇ ಸಾಲಿನಲ್ಲಿ 59 ಹುದ್ದೆಗಳ ಪೈಕಿ ನೇಮಕಾತಿಗೆ ಬಾಕಿ ಉಳಿದಿರುವ ಒಟ್ಟು 14 ಅಭ್ಯರ್ಥಿಗಳಿಗೆ ಅಂತಿಮ ತಿಳುವಳಿಕೆ ಪತ್ರ ನೀಡಲಾಗಿದ್ದು, ಅಭ್ಯರ್ಥಿಗಳ ನೇಮಕಾತಿ ರದ್ದುಪಡಿಸಿದ ನಂತರದಲ್ಲಿ ಶೇ.10 |

| | | |
|---|---|---|
| | ಕಾರಣವೇನು? | ರಷ್ಟು ಹೆಚ್ಚುವರಿ ಆಯ್ಕೆಪಟ್ಟಿ ಸಲ್ಲಿಸಲು ಕೆ.ಪಿ.ಎಸ್.ಸಿ ಗೆ ಪ್ರಸ್ತಾವನೆ ಸಲ್ಲಿಸಲು ಹಾಗೂ ಖಾಲಿ ಇರುವ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಕ್ರಮವಹಿಸಲಾಗುತ್ತಿದೆ.<br><br>ಅಬಕಾರಿ ಪೇದೆ: ಪ್ರಸ್ತುತ ಅಬಕಾರಿ ಪೇದೆ ವೃಂದದಲ್ಲಿ ಒಟ್ಟು 727 ಹುದ್ದೆಗಳು ಖಾಲಿ ಇದ್ದು, ಅವುಗಳ ಪೈಕಿ 684 ಹುದ್ದೆಗಳು ನೇರ ನೇಮಕಾತಿಗೆ ಲಭ್ಯವಿರುತ್ತವೆ.<br>2019ನೇ ಸಾಲಿನಲ್ಲಿ ಒಟ್ಟು 1003 ಹುದ್ದೆಗಳನ್ನು ಕೆ.ಪಿ.ಎಸ್.ಸಿ. ಮೂಲಕ ನೇಮಕಾತಿ ಮಾಡಲಾಗಿದ್ದು, ಈ ಪೈಕಿ 254 ಅಭ್ಯರ್ಥಿಗಳು ಕರ್ತವ್ಯಕ್ಕೆ ವರದಿ ಮಾಡಿಕೊಂಡಿರುವುದಿಲ್ಲ. ಈ ಹಿನ್ನೆಲೆಯಲ್ಲಿ ಸದರಿ ಹುದ್ದೆಗಳಿಗೆ ಹೆಚ್ಚುವರಿ ಆಯ್ಕೆಪಟ್ಟಿಯನ್ನು ಸಲ್ಲಿಸುವಂತೆ ಕರ್ನಾಟಕ ಲೋಕ ಸೇವಾ ಆಯೋಗವನ್ನು ಕೋರಲಾಗಿ, ಕರ್ನಾಟಕ ಲೋಕಸೇವಾ ಆಯೋಗವು ದಿನಾಂಕ:17.02.2023 ರಂದು ಒಟ್ಟು 122 ಅಭ್ಯರ್ಥಿಗಳ ಹೆಚ್ಚುವರಿ ಆಯ್ಕೆ ಪಟ್ಟಿಯನ್ನು ಪ್ರಕಟಿಸಿದೆ. ಸದರಿ ಹುದ್ದೆಗಳನ್ನು ಜಿಲ್ಲಾವಾರು ಹಂಚಿಕೆ ಮಾಡಿದ ನಂತರದಲ್ಲಿ ದಾಖಲಾತಿಗಳನ್ನು ಪರಿಶೀಲಿಸಿ ಜಿಲ್ಲಾ ಹಂತದಲ್ಲಿ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಕ್ರಮ ವಹಿಸಲಾಗುತ್ತದೆ. |

**ಆಇ 47 ಇಎಲ್‌ಕ್ಯೂ 2023**

(ಆರ್.ಬಿ.ತಿಮ್ಮಾಪುರ)

ಅಬಕಾರಿ ಸಚಿವರು